Akashvani : Bangalore
Regional Bulletin In Kannada
24.03.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>

ಮುಖ್ಯಾಂಶಗಳು

೧. ವಿಧಾನಸಭೆಯಲ್ಲಿ ಸರ್ವಾನುಮತದ ಅಂಗೀಕಾರ ಪಡೆದ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ ರಕ್ಷಣೆ ಮತ್ತು ಸಕ್ರಮಾತಿ ವಿಧೇಯಕ

೨. ಜಿಬಿಎ ಹೊರತುಪಡಿಸಿ ರಾಜ್ಯದ ಇತರೆಡೆ ಪ್ರತಿ ದಿನ ಆರು ಸಾವಿರದ ೮೩ ಟನ್ ತ್ಯಾಜ್ಯ ಸಂಸ್ಕರಣೆ- ಮೇಲ್ಮನೆಯಲ್ಲಿ ಸಚಿವ ರಹೀಂಖಾನ್ ಸ್ಪಷ್ಟನೆ

೩. ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ನವೀಕೃತ ಪ್ರವೇಶ ದ್ವಾರ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೪. ಐತಿಹಾಸಿಕ ಬೆಂಗಳೂರು ಕರಗ ಮಹೋತ್ಸವಕ್ಕೆ ಇಂದು ಸಂಜೆ ಅಧಿಕೃತ ಚಾಲನೆ

೫. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುವ ಎಲ್ಲಾ ಪಂದ್ಯಗಳಲ್ಲಿಯೂ ಮೃತರ ಸ್ಮರಣಾರ್ಥ ೧೧ ಆಸನ ಮೀಸಲಿಡಲು ಕೆಎಸ್‌ಸಿಎ ನಿರ್ಧಾರ

<><*<><>*><>

೨೦೨೬ನೇ ಸಾಲಿನ ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ ರಕ್ಷಣೆ ಮತ್ತು ಸಕ್ರಮಾತಿ ವಿಧೇಯಕಕ್ಕೆ ವಿಧಾನಸಭೆಯಲ್ಲಿ ಇಂದು ಚರ್ಚೆಯಿಲ್ಲದೆ ಅಂಗೀಕಾರ ದೊರೆತಿದೆ.ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧುಬಂಗಾರಪ್ಪ, ವಿಧೇಯಕ ಮಂಡಿಸಿ ಮಾತನಾಡಿ, ಸರ್ಕಾರಿ ಶಾಲೆಗೆ ಕೆಲವರು ಜಮೀನನ್ನು ದಾನ ನೀಡಿದ್ದಾರೆ. ಅಂತಹ ಜಮೀನು ಇಲಾಖೆ ಹೆಸರಿಗೆ ದಾಖಲಾಗಿರುವುದಿಲ್ಲ. ಶಾಲಾ ಆಸ್ತಿ ಸಂರಕ್ಷಣೆಯ ಉದ್ದೇಶದಿಂದ ಈ ವಿಧೇಯಕವನ್ನು ತರಲಾಗಿದೆ. ಇದಕ್ಕೆ ಅನುಮೋದನೆ ನೀಡಬೇಕು ಎಂದು ಕೋರಿದರು. ವಿರೋಧಪಕ್ಷದ ನಾಯಕ ಆರ್.ಅಶೋಕ ಈ ವಿಧೇಯಕವನ್ನು ಸ್ವಾಗತಿಸಿ, ತಮ್ಮ ಬೆಂಬಲವೂ ಇದೆ ಎಂದು ತಿಳಿಸಿದರು. ಜಮೀನನ್ನು ಶಾಲೆ ಹೆಸರಿಗೆ ಖಾತೆ ಮಾಡಿಸಿ ಎಂಬ ಸಲಹೆ ನೀಡಿದರು. ಇದೇ ವೇಳೆ, ಜೆಡಿಎಸ್ ಹಿರಿಯ ಶಾಸಕ ಜಿ.ಟಿ.ದೇವೇಗೌಡ ಸೇರಿದಂತೆ ಹಲವು ಶಾಸಕರು ಕಾಲೇಜು, ಆಸ್ಪತ್ರೆ ಸೇರಿದಂತೆ ಸರ್ಕಾರಿ ಸಂಸ್ಥೆಗಳ ಆಸ್ತಿಗಳನ್ನು ಆಯಾ ಸಂಸ್ಥೆ ಹೆಸರುಗಳಿಗೆ ದಾಖಲಾಗುವಂತೆ ಮಾಡಬೇಕು ಎಂದು ಆಡಳಿತ ಪಕ್ಷಕ್ಕೆ ಸಲಹೆ ನೀಡಿದರು. ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಸದನದ ಎಲ್ಲಾ ಸದಸ್ಯರ ಪರವಾಗಿ ಈ ವಿಧೇಯಕ ತಂದಿರುವುದಕ್ಕೆ  ಅಭಿನಂದಿಸುವುದಾಗಿ ತಿಳಿಸಿದರು.

<><*<><>*<><

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹೊರತುಪಡಿಸಿ ರಾಜ್ಯದ ೩೨೫ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರತಿದಿನ ಸುಮಾರು ೭ ಸಾವಿರದ ೩೦೪ ಟನ್ ಘನತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, ೬ ಸಾವಿರದ ೮೩ ಟನ್ ಗಳಷ್ಟು ತ್ಯಾಜ್ಯ ಸಂಸ್ಕರಣೆಯಾಗುತ್ತಿದೆ ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂಖಾನ್ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ ಡಿ.ಎಸ್.ಅರುಣ್ ಪ್ರಶ್ನೆಗೆ ಉತ್ತರ ನೀಡಿದ ಅವರು, ಕೆಲವು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮರ್ಪಕ ಘನ ತ್ಯಾಜ್ಯ ನಿರ್ವಹಣೆಗೆ ಅಗತ್ಯವಾದ ಸಂಪೂರ್ಣ ಮೂಲಸೌಕರ್ಯಗಳ ಕೊರತೆಯಿರುವುದರಿಂದ ತ್ಯಾಜ್ಯ ವಿಲೇವಾರಿಯಲ್ಲಿ ಸಮಸ್ಯೆಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಹೇಳಿದ್ದಾರೆ. ಜನ ಸಾಂದ್ರತೆ ಹೆಚ್ಚಿರುವ ಪ್ರಮುಖ ರಸ್ತೆಗಳಲ್ಲಿ ತ್ಯಾಜ್ಯ ಶೇಖರಣೆಯಾಗದಂತೆ ಎಚ್ಚರ ವಹಿಸಲಾಗುತ್ತಿದೆ. ವಾರ್ಡ್ ಮಟ್ಟದಲ್ಲಿ ದೈನಂದಿನ ಸ್ವಚ್ಛತೆ ಮತ್ತು ಮನೆ, ಅಂಗಡಿ, ವಾಣಿಜ್ಯ ಸಂಕೀರ್ಣಗಳಿಂದ ಪ್ರತಿದಿನ ತ್ಯಾಜ್ಯ ಸಂಗ್ರಹಣೆ ಕಾರ್ಯವನ್ನು ನಿಯಮಿತವಾಗಿ ಕೈಗೊಳ್ಳಲು ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಸಚಿವ ರಹೀಂಖಾನ್ ಸದನಕ್ಕೆ ತಿಳಿಸಿದ್ದಾರೆ.

<><*<><>*<><

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ನವೀಕೃತ ಪ್ರವೇಶ ದ್ವಾರವನ್ನು ಇಂದು ಉದ್ಘಾಟಿಸಿದರು. ಇದೇ ವೇಳೆ, ೨೦೨೬ನೇ ಸಾಲಿನಲ್ಲಿ ಸದಸ್ಯತ್ವದ ಅವಧಿ ಪೂರ್ಣಗೊಳಿಸುತ್ತಿರುವ ಸದಸ್ಯರ ಜತೆ ಗ್ರೂಪ್ ಫೋಟೋ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪಾಲ್ಗೊಂಡರು. ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್, ವಿರೋಧ ಪಕ್ಷದ ನಾಯಕ ಆರ್.ಅಶೋಕ, ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಸಚಿವರಾದ ಎಚ್.ಕೆ.ಪಾಟೀಲ್, ಡಾ.ಜಿ.ಪರಮೇಶ್ವರ್, ಬೋಸರಾಜ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*<><

ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆಗೆ ಸಲ್ಲಿಕೆಯಾಗಿರುವ ನಾಮಪತ್ರಗಳ ಪರಿಶೀಲನಾ ಕಾರ್ಯ ಇಂದು ನಡೆಯುತ್ತಿದೆ. ಅಪೂರ್ಣ ಮತ್ತು ಕ್ರಮ ಬದ್ಧವಲ್ಲದ ನಾಮಪತ್ರಗಳ ಪರಿಶೀಲನಾ ಕಾರ್ಯ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಇಂದು ಬೆಳಿಗ್ಗೆಯಿಂದ ಆರಂಭಗೊಂಡಿದೆ. ಕ್ಷೇತ್ರದಿಂದ ಆಯ್ಕೆ ಬಯಸಿ ಒಟ್ಟು ೩೯ ಅಭ್ಯರ್ಥಿಗಳು ೪೫ ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆಗೆ ಕಡೆಯ ದಿನವಾಗಿದ್ದ ನಿನ್ನೆ ಒಂದೇ ದಿನ ೩೦ ಅಭ್ಯರ್ಥಿಗಳು ೩೫ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರ ಹಿಂಪಡೆಯಲು ಇದೇ ೨೬ ಕಡೆಯ ದಿನವಾಗಿದೆ. ಈ ನಡುವೆ ಉಪಚುನಾವಣೆಯ ಹಿನ್ನೆಲೆಯಲ್ಲಿ ಕಳೆದ ೨೪ ಗಂಟೆಗಳಲ್ಲಿ ೪೦ ಸಾವಿರಕ್ಕೂ ಹೆಚ್ಚು ಮೌಲ್ಯದ ಅಕ್ರಮ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

<><*<><>*><>

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಸಂಬಂಧಿಸಿದಂತೆ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾದ ನಿನ್ನೆ ಒಟ್ಟು ೧೩ ಅಭ್ಯರ್ಥಿಗಳಿಂದ ೧೯ ನಾಮಪತ್ರ ಸಲ್ಲಿಕೆಯಾಗಿವೆ ಎಂದು ಚುನಾವಣಾಧಿಕಾರಿ ಸಂತೋಷ ಜಗಲಾಸರ ತಿಳಿಸಿದ್ದಾರೆ. ಬಿಜೆಪಿಯಿಂದ ವೀರಣ್ಣ ಚರಂತಿಮಠ ೩ ನಾಮಪತ್ರ ಸಲ್ಲಿಸಿದರೆ, ಕಾಂಗ್ರೆಸ್ ಪಕ್ಷದಿಂದ ಉಮೇಶ ಮೇಟಿ ೪ ನಾಮಪತ್ರ ಸಲ್ಲಿಸಿದ್ದಾರೆ. ಪಕ್ಷೇತರ ಅಭ್ಯರ್ಥಿಯಾಗಿ ರವಿ ಶಿವಪ್ಪ ಪಡಸಲಗಿ ಎರಡು ನಾಮಪತ್ರ ಸಲ್ಲಿಸಿದ್ದಾರೆ. ಈವರೆಗೆ ಒಟ್ಟು ೧೬ ಅಭ್ಯರ್ಥಿಗಳಿಂದ ಒಟ್ಟು ೨೬ ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಚುನಾವಣಾ ಅಧಿಕಾರಿ ಮಾಹಿತಿ ನೀಡಿದ್ದಾರೆ.

<><*<><>*><>

ಬೆಂಗಳೂರಿನ ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ಇಂದು ಸಂಜೆ ಅಧಿಕೃತವಾಗಿ ಧ್ವಜಾರೋಹಣ ನೆರವೇರಿಸುವ ಮೂಲಕ ಐತಿಹಾಸಿಕ ಕರಗ ಮಹೋತ್ಸವಕ್ಕೆ ಚಾಲನೆ ದೊರೆಯಲಿದೆ. ಒಟ್ಟು ೧೧ ದಿನಗಳ ಕಾಲ ನಡೆಯುವ ಈ ಉತ್ಸವದಲ್ಲಿ ಇದೇ ೨೦ರಂದು ಹಸಿ ಕರಗ ನಡೆಯಲಿದೆ. ಏಪ್ರಿಲ್ ೧ರಂದು ಮಧ್ಯರಾತ್ರಿ ಕರಗ ಶಕ್ತ್ಯೋತ್ಸವ ನಡೆಯಲಿದೆ. ಈ ದಿನವೇ ದ್ರೌಪದಿ ದೇವಿಯ ಹೂವಿನ ಕರಗ ನಗರದಲ್ಲಿ ಸಂಚರಿಸಿ ಲಕ್ಷಾಂತರ ಭಕ್ತರಿಗೆ ದರ್ಶನ ನೀಡಲಿದೆ. ಕಳೆದ ವರ್ಷ ೧೫ನೇ ಬಾರಿ ಯಶಸ್ವಿಯಾಗಿ ಕರಗ ಹೊತ್ತಿದ್ದ ಜ್ಞಾನೇಂದ್ರ ಸ್ವಾಮಿ, ಈ ಸಲ ೧೬ನೇ ಬಾರಿಗೆ ಕರಗ ಹೊರಲಿದ್ದಾರೆ.

<><*<><>*><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟ ೧೧ ಮಂದಿಯ ಸ್ಮರಣಾರ್ಥವಾಗಿ ಕ್ರೀಡಾಂಗಣದಲ್ಲಿ ೧೧ ಆಸನಗಳನ್ನು ಮೀಸಲಿಡುವುದಾಗಿ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ತಿಳಿಸಿದೆ. ಚಿನ್ನಸ್ವಾಮಿಯಲ್ಲಿ ನಡೆಯುವ ಪ್ರತಿಯೊಂದು ಪಂದ್ಯಕ್ಕೂ ೧೧ ಆಸನಗಳನ್ನು ಮೀಸಲಿಟ್ಟು, ಈ ಆಸನಗಳನ್ನು ಮಾರಾಟ ಮಾಡದಿರಲು ಕೆಎಸ್‌ಸಿಎ ನಿರ್ಧರಿಸಿದೆ. ಅಂತಾರಾಷ್ಟ್ರೀಯ ಪಂದ್ಯಗಳ ನಡೆಯುವ ಸಂದರ್ಭದಲ್ಲೂ ೧೧ ಆಸನಗಳನ್ನು ಮೀಸಲಿಡಲಾಗಿದೆ. ಜೊತೆಗೆ ಮುಖ್ಯದ್ವಾರದಲ್ಲಿ ಬೋರ್ಡ್ ಅಳವಡಿಕೆ ಮಾಡಿ ಅದರಲ್ಲಿ ಮೃತರ ಹೆಸರನ್ನು ನಮೂದಿಸಲಾಗಿದೆ. ಆಟಗಾರರು ಅಭ್ಯಾಸ ಪಂದ್ಯದ ವೇಳೆ, ೧೧ ನಂಬರ್‌ನ ಜರ್ಸಿಯನ್ನು ಧರಿಸಲಿದ್ದಾರೆ. ಇದರ ಜೊತೆಗೆ ಉದ್ಘಾಟನಾ ಪಂದ್ಯದ ವೇಳೆ, ಕೆಎಸ್‌ಸಿಎ ಹಾಗೂ ಆರ್‌ಸಿಬಿ ಆಡಳಿತ ಮಂಡಳಿ ಒಂದು ನಿಮಿಷ ಮೌನಾಚರಣೆ ಮಾಡಲಿದೆ ಎಂದು ಕೆಎಸ್‌ಸಿಎ ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ಬಾರಿ ಆರ್‌ಸಿಬಿ ವಿಜಯೋತ್ಸವ ಸಂದರ್ಭದಲ್ಲಿ ಅಭಿಮಾನಿಗಳ ನೂಕುನುಗ್ಗಲಿನಿಂದಾಗಿ ಕಾಲ್ತುಳಿತ ಸಂಭವಿಸಿ, ೧೧ ಮಂದಿ ಸಾವನ್ನಪ್ಪಿದ್ದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ಒಟ್ಟು ೭೪ ಕೋಟಿ ೧೨ ಲಕ್ಷ ರೂಪಾಯಿ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮಾ ಆಗಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕೇಂದ್ರ ಕೃಷಿ ಸಚಿವಾಲಯದಿಂದ ವಿಮಾ ಕಂಪನಿ ಮೇಲೆ ಒತ್ತಡ ಹೇರುವ ಮೂಲಕ ಈ ವಿಮಾ ಮೊತ್ತವು ಬಿಡುಗಡೆಯಾಗಿದೆ. ಜಿಲ್ಲೆಯಲ್ಲಿ ವ್ಯಾಪಕವಾಗಿ ಹರಡಿರುವ ಮಾರಕ ಎಲೆ ಚುಕ್ಕಿ ರೋಗ ಹಾಗೂ ಅಡಿಕೆ ಇಳುವರಿ ಕುಂಠಿತದಿಂದ ಕಂಗಾಲಾಗಿದ್ದ ರೈತರಿಗೆ ಈ ಪರಿಹಾರವು ಆರ್ಥಿಕ ಸಂಜೀವಿನಿಯಾಗಿದೆ. ಜಿಲ್ಲೆಯ ೧೯೪ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅಡಿಕೆ, ಮಾವು, ಕಾಳುಮೆಣಸು ಮತ್ತು ಶುಂಠಿ ಬೆಳೆಗಾರರ ಒಟ್ಟು ೯೦ ಸಾವಿರದ ೨೩೫ ಪ್ರಸ್ತಾವನೆಗಳನ್ನು ಪುರಸ್ಕರಿಸಿ, ೨೦ ಸಾವಿರದ ೭೦೨ ಹೆಕ್ಟೇರ್ ಪ್ರದೇಶಕ್ಕೆ ಈ ಪರಿಹಾರವನ್ನು ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಕೊಡಗು ಜಿಲ್ಲೆಯ ಶಿಕ್ಷಣ ಸಂಸ್ಥೆಗಳಿಗೆ ಉತ್ತಮ ವೇದಿಕೆ ಕಲ್ಪಿಸುವ ಉದ್ದೇಶದಿಂದ, ನಾಳೆಯಿಂದ ಇದೇ ೨೭ ರವರೆಗೆ ಮಡಿಕೇರಿಯಲ್ಲಿ ಮೂರು ದಿನಗಳ ಸಮಗ್ರ ಶೈಕ್ಷಣಿಕ ಕಾರ್ಯಕ್ರಮ ಎಜು ಕನೆಕ್ಟ್ ಮತ್ತು ಉದ್ಯೋಗ ಮೇಳ ೨೦೨೭ ನಡೆಯಲಿದೆ. ರೀಡ್‌ಟೆಕ್ ಸಂಸ್ಥೆಯ ವತಿಯಿಂದ ಕೊಡಗು ವಿಶ್ವವಿದ್ಯಾಲಯ ಮತ್ತು ನ್ಯಾಚುರಲ್ ಸೋರ್ಸ್ ಡೆವಲಪ್ಮೆಂಟ್ ಸೆಂಟರ್ ಅವರ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದೆ. ಈ ಮೇಳದಲ್ಲಿ ಪದವೀದರರು ಮತ್ತು ತರಬೇತಿ ಪಡೆದ ಶಿಕ್ಷಕರು ಅನುಭವ ಹೊಂದಿದ ಶಿಕ್ಷಕರು, ಉಪನ್ಯಾಸಕರು ಹಾಗೂ ಬೋಧಕೇತರ ಉದ್ಯೋಗ ಹುಡುಕುವವರಿಗೆ ಸ್ಥಳದಲ್ಲಿಯೇ ನೋಂದಣಿ ಮತ್ತು ಸಂದರ್ಶನದ ಅವಕಾಶ ಇರಲಿದೆ.

<><*<><>*><>

೧. ರೈತರು ಬೆಳೆದ ಬೆಳೆಗಳಿಗೆ ಭದ್ರತೆ ಬೇಕಾದರೆ ಸೂಕ್ತ ಮಾರುಕಟ್ಟೆ ಅವಶ್ಯಕತೆ ಇದೆ. ಹೀಗಾಗಿ ಯಾವ ಯಾವ ಬೆಳೆಗಳಿಗೆ ಎಲ್ಲಿ ಸೂಕ್ತ ಮಾರುಕಟ್ಟೆ ಇದೆ ಎನ್ನುವುದನ್ನು ರೈತರು ತಿಳಿದುಕೊಳ್ಳಬೇಕೆಂದು ಬೆಂಗಳೂರಿನ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ಆಡಳಿತ ಅಧ್ಯಕ್ಷರಾದ ನಗರದ ಮಹದೇವಪ್ಪ ಕೊಪ್ಪಳದಲ್ಲಿ ತಿಳಿಸಿದ್ದಾರೆ.

೨. ಬೆಳಗಾವಿಯ ಕೈಗಾರಿಕಾ ಇಲಾಖೆ ವತಿಯಿಂದ ಹಮ್ಮಿಕೊಂಡ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಘಟಕಗಳಿಗೆ ಕೈಗಾರಿಕಾ ನೀತಿ ರೂಪಿಸುವ ವಿಭಾಗ ಮಟ್ಟದ ಕಾರ್ಯಾಗಾರವನ್ನು ಶಾಸಕ ಅಭಯ ಪಾಟೀಲ ಇಂದು ಉದ್ಘಾಟಿಸಿದರು.